# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

ಸಂಖ್ಯೆ :
No. ಬೆಂಅಪ್ರಾ/ನಮ/ಅಸ/ಅಅ-2/ತಾಸ-3/ಉ/ಟಿ- 09/2020-21

ದಿನಾಂಕ :
Date : 27.11.2020

ಬೆಂಗಳೂರು
ಅನುಸೂಚಿ–ಎ ೫
(ಉಪವಿಧಿ ಸಂಖ್ಯೆ: 4.1)

ಆಯುಕ್ತರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

## ನಕ್ಷೆ ಮಂಜೂರಾತಿ ಪತ್ರ

ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ 877, ದಿನಾಂಕ: 02.07.2020 ರಂದು ನಕ್ಷೆ ಮಂಜೂರಾತಿಗೆ ಅನುಮೋದನೆ ನೀಡಿರುತ್ತಾರೆ. ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದ ಸರ್ವೆ ನಂ. 118/1(ಪಿ), 118/2(ಪಿ)ರಲ್ಲಿನ 04ಎಕರೆ-00ಗುಂಟೆ ಪೈಕಿ ಹಾಲಿ ಸ್ಥಳದಂತೆ 03ಎ-37ಗುಂಟೆ ವಿಸ್ತೀರ್ಣದ ಪ್ರದೇಶವಾಗಿರುತ್ತದೆ.

ಶ್ರೀಮತಿ/ಶ್ರೀ

ಶ್ರೀ ಶಿವಶಂಕರ್ ಚಿಕ್ಕೇರಿ
ಮೆ: ಡಿ.ಎಸ್. ಮ್ಯಾಕ್ಸ್ ಪ್ರಾಪರ್ಟೀ ಲಿ.,
#1854, 17ನೇ ಮುಖ್ಯರಸ್ತೆ,
30 ನೇ ಬಿ ಅಡ್ಡರಸ್ತೆ, ಹೆಚ್.ಬಿ.ಆರ್. ಬಡಾವಣೆ,
1ನೇ ಹಂತ, 5ನೇ ಬ್ಲಾಕ್, ಬೆಂಗಳೂರು - 560043.

ಮಾನ್ಯರೆ,

ನೀವು, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಿತ್ತಗನೂರು ಗ್ರಾಮದ ಸರ್ವೆ ನಂ. 118/1(ಪಿ), 118/2(ಪಿ)ರಲ್ಲಿನ 04ಎಕರೆ-00ಗುಂಟೆ ಪೈಕಿ ಹಾಲಿ ಸ್ಥಳದಂತೆ 03ಎ-37ಗುಂಟೆ ವಿಸ್ತೀರ್ಣದ ಪ್ರದೇಶದಲ್ಲಿ (Wing A & Wing B) ಕಟ್ಟಡದ 2ತಳ+ನೆಲ+14ಮೇಲಂತಸ್ತುಗಳು, ನೆಲಮಹಡಿಯಲ್ಲಿ ಕ್ಲಬ್ ಹೌಸ್ ಒಳಗೊಂಡಂತೆ 641 ವಸತಿ ಘಟಕ ಮತ್ತು 72 EWS ಒಳಗೊಂಡಂತೆ ಒಟ್ಟು 713 ಬಹುವಸತಿ ಘಟಕಗಳ ಕಟ್ಟಡವನ್ನು ನಿರ್ಮಾಣ ಮಾಡಲು, ದಿನಾಂಕ 14.08.2020 ರಲ್ಲಿ ಈ ಕಛೇರಿಗೆ ಅರ್ಜಿ ಸಲ್ಲಿಸಿ, ನಕ್ಷೆ ಮಂಜೂರಾತಿ ಕೋರಿರುತ್ತೀರಿ ನಕ್ಷೆ ಮಂಜೂರಾತಿಯನ್ನು ದಿನಾಂಕ: 27.11.2020 ರಿಂದ ದಿನಾಂಕ: 26.11.2022 ರವರೆಗೆ ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಮಂಜೂರಾತಿ ಮಾಡಲಾಗಿದೆ ಎಂದು ಈ ಮೂಲಕ ನಾನು ತಿಳಿಯಪಡಿಸಿದ್ದೇನೆ.

### ಪಾಲಿಸಬೇಕಾದ ಷರತ್ತುಗಳು

1) ಪ್ರಾಧಿಕಾರದಿಂದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.
2) ರಸ್ತೆಗಾಗಿ ಮೀಸಲಾಗಿರಿಸಿದ ಜಾಗದಲ್ಲಿ ಯಾವುದೇ ರೀತಿಯ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದಲ್ಲ.
3) ರಸ್ತೆ ವಿಸ್ತೀರ್ಣಕ್ಕಾಗಿ ಕಾಯ್ದಿರಿಸಿರುವ ಪ್ರದೇಶವನ್ನು ಪರಿತ್ಯಾಜನ ಪತ್ರವನ್ನು ಪ್ರಾರಂಭಿಕ ಪ್ರಮಾಣ ಪತ್ರವನ್ನು ಪಡೆಯುವ ಮುನ್ನ ಪ್ರಾಧಿಕಾರಕ್ಕೆ ಹಸ್ತಾಂತರಿಸುವುದು, ಇಲ್ಲವಾದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡುವ ಬಗ್ಗೆ ಪರಿಗಣಿಸಲಾಗುವುದಿಲ್ಲ.
4) ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ನೀಡಿದ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಿದ ಷರತ್ತುಗಳನ್ನು ಚಾಚೂ ತಪ್ಪದೇ ಪಾಲಿಸುವುದು. ತಪ್ಪಿದಲ್ಲಿ ಸ್ವಾಧೀನಾನುಭವ ಪತ್ರ (Occupation Certificate) ಪಡೆಯುವ ನಿಮ್ಮ ಕೋರಿಕೆಯನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಪು.ತಿ.ನೋ...

ಟಿ. ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು 560 020
T. Chowdaiah Road, Kumarapark West, Bangalore 560 020, Facsimile : 2334 5799, E-mail : bda@vsnl.com

5) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡದ ಪ್ರವೇಶ ದ್ವಾರದಲ್ಲಿ ಒಳಬರುವ ಹಾಗೂ ಹೊರಹೋಗುವ ವಾಹನಗಳಿಗೆ ಪ್ರತ್ಯೇಕ ವ್ಯವಸ್ಥೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳುವುದು.

6) ಕಟ್ಟಡ ಮಂಜೂರಾತಿಯ ಕುರಿತು ಕಾರ್ಮಿಕ ಇಲಾಖೆ ಅಥವಾ ಪ್ರಾಧಿಕಾರ, ನಿರ್ದೇಶನ ನೀಡಿದಲ್ಲಿ ಅರ್ಜಿದಾರರು ವ್ಯತ್ಯಾಸದ ಹಣವನ್ನು ಭರಿಸತಕ್ಕದ್ದು.

7) ಕಟ್ಟಡ ನಿರ್ಮಾಣ ವೆಚ್ಚವು ಪ್ರತೀ ಚದರ ಅಡಿಗೆ 650/- ಕ್ಕಿಂತ ಹೆಚ್ಚಾದಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಅಂದಾಜು ಮೊತ್ತದ ಶೇ 1% ರಷ್ಟು ಮೊತ್ತವನ್ನು ಪ್ರಾಧಿಕಾರಕ್ಕೆ ಭರಿಸತಕ್ಕದ್ದು.

8) ಅರ್ಜಿದಾರರು ಕಟ್ಟಡ ನಕ್ಷೆ ಮಂಜೂರಾತಿ ಸಮಯದಲ್ಲಿ ಬಾಕಿ ಇರುವ ಯಾವುದೇ ಅಭಿವೃದ್ಧಿ ಶುಲ್ಕ ಅಥವಾ ಇನ್ನಾವುದೇ ಶುಲ್ಕಗಳನ್ನು ಬಿಬಿಎಂಪಿ/ಬಿಡಿಎ ಸಂಸ್ಥೆಗಳಿಗೆ ಕಟ್ಟಡ ಪ್ರಾರಂಭಿಸುವ ಮೊದಲು ಸಂದಾಯ ಮಾಡತಕ್ಕದ್ದು.

9) ಅರ್ಜಿದಾರರು ಅಗತ್ಯವಿದ್ದಲ್ಲಿ State Level Environment Impact Assessment Authority, Karnataka (Constituted by Ministry of Environment and Forest, Government of India) ರವರಿಂದ ಯೋಜನೆಯ ಬಗ್ಗೆ ಕ್ಲಿಯರೆನ್ಸ್ ಪತ್ರವನ್ನು ಸ್ವಾಧೀನಾನುಭವ ಪತ್ರವನ್ನು ಪಡೆಯುವ ಸಮಯದಲ್ಲಿ ಸಲ್ಲಿಸತಕ್ಕದ್ದು.

10) ಅರ್ಜಿದಾರರು ಕಾಮಗಾರಿ ಪ್ರಾರಂಭಿಸುವ ಮೊದಲು ಕಾಮಗಾರಿ ಪ್ರಾರಂಭಿಕ ಪ್ರಮಾಣ ಪತ್ರ ಹಾಗೂ ಕಾಮಗಾರಿ ಮುಕ್ತಾಯದ ನಂತರ ಸ್ವಾಧೀನಾನುಭವ ಪತ್ರವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪಡೆಯುವುದು ಕಡ್ಡಾಯವಿರುತ್ತದೆ.

11) ಅರ್ಜಿದಾರರು ಕಟ್ಟಡಕ್ಕೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

12) ಕಾಮಗಾರಿ ಪ್ರಾರಂಭಿಸುವುದಕ್ಕಿಂತ ಪೂರ್ವದಲ್ಲಿ ಸಂಬಂಧಪಟ್ಟ ಇಲಾಖೆಯಿಂದ ಖಾತಾ ಹಾಗೂ ಲೈಸನ್ಸ್ ನ್ನು ಪಡೆಯುವುದು.

13) ಕಟ್ಟಡದ ಗುಣಮಟ್ಟ, ಸುರಕ್ಷತೆ ಹಾಗೂ ವಿನ್ಯಾಸಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಅಂಶಗಳ ಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ ಆಗಿರುತ್ತದೆ.

14) ಯೋಜನೆಯಲ್ಲಿ ಮಳೆ ನೀರು ಕೊಯ್ಲುಗಾಗಿ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಿಕೊಂಡು ಗೃಹ ಹಾಗೂ ಇನ್ನಿತರೆ ಉಪಯೋಗಗಳಿಗಾಗಿ ಬಳಸಲು ಅವಕಾಶ ಕಲ್ಪಿಸಿಕೊಳ್ಳತಕ್ಕದ್ದು.

15) ಕುಡಿಯುವ ನೀರು ಹಾಗೂ ಬಳಸುವ ನೀರಿಗಾಗಿ ಪ್ರತ್ಯೇಕ ಪೈಪ್ ಲೈನುಗಳನ್ನು (Dual Piping System) ಅಳವಡಿಸುವುದು.

16) ಅಭಿವೃದ್ಧಿದಾರರು ಒಳಚರಂಡಿ ವ್ಯವಸ್ಥೆ ಕಾಮಗಾರಿಯನ್ನು ಸಂಬಂಧಪಟ್ಟ ಇಲಾಖೆಗೆ (BWSSB & DB) ನಿಗಧಿಪಡಿಸಿದ ಹಣವನ್ನು ಸಂಧಾಯ ಮಾಡಿ ಇಲಾಖೆಯವರ ಮಾರ್ಗದರ್ಶನದಲ್ಲಿ ನಿರ್ವಹಿಸುವುದು.

17) ಅರ್ಜಿದಾರರು Occupancy Certificate ಅನ್ನು ಪಡೆಯಲು ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸುವ ಸಮಯದಲ್ಲಿ ನೀರು ಸರಬರಾಜು ಕಾಮಗಾರಿಗಳು Sewage Treatment Plant ಹಾಗೂ Rain Water Harvesting ಅನ್ನು ನಿಯಮಕ್ಕನುಗುಣವಾಗಿ ನಿರ್ವಹಿಸಿರುವ ಬಗ್ಗೆ BWSSB ಯಿಂದ ದೃಢೀಕರಣ ಪತ್ರವನ್ನು ಸಲ್ಲಿಸುವುದು.

18) ಅರ್ಜಿದಾರರು ಕಟ್ಟಡದ ಆವರಣದಲ್ಲಿ ಗಿಡಗಳನ್ನು ನೆಡುವುದು ಕಡ್ಡಾಯವಿರುತ್ತದೆ.

19) ಅರ್ಜಿದಾರರು ಯಾವುದೇ ರೀತಿಯ ಪ್ಲಾಸ್ಟಿಕ್, ಪೇಪರ್, ಗಾರ್ಬೇಜ್ ಇತ್ಯಾದಿ ತ್ಯಾಜ್ಯಗಳನ್ನು ಸಂಗ್ರಹಿಸಿ Drywaste ಮತ್ತು Wetwaste ಅನ್ನು ಬೇರ್ಪಡಿಸಿ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

20) ಪ್ರಧಾನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ ಬೆಂಗಳೂರು ರವರ ದಿನಾಂಕ: 04-03-2006 ರಂದು ವಿಧಿಸಿದ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು.

21) ಅರ್ಜಿದಾರರು ನೀರು ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅವಲಂಬಿಸದೆ ನೀರಿಗಾಗಿ ತಮ್ಮ ಸ್ವಂತ ವ್ಯವಸ್ಥೆ ಮಾಡಿಕೊಳ್ಳುವುದು.

Next Page...

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

# Bangalore Development Authority

ಸಂಖ್ಯೆ :
No.

ದಿನಾಂಕ :
Date :

22) ಅಭಿವೃದ್ಧಿದಾರರು ವಿದ್ಯುತ್ ಚ್ಚಕ್ತಿ ಟ್ರಾನ್ಸ್ ಫಾರ್ಮರ್ ಗಾಗಿ (ಮಂಜೂರಾದ ನಕ್ಷೆಯಲ್ಲಿ ತೋರಿಸಿದಂತೆ) ಮೀಸಲಿರಿಸಿದ ಜಾಗದಲ್ಲಿಯೇ ಅದನ್ನು ಸ್ಥಾಪಿಸುವುದು.

23) W.P No. 31562/1997 ರಲ್ಲಿ ನ್ಯಾಯಾಲಯವು ನೀಡುವ ಅಂತಿಮ ತೀರ್ಮಾನಕ್ಕೆ ಬದ್ಧರಾಗಿರುವುದು.

24) ಅಭಿವೃದ್ಧಿದಾರರು ಯೋಜನೆ/ಕಟ್ಟಡದ ನಿರ್ಮಾಣಕ್ಕಾಗಿ ಅಗತ್ಯ ತಾಂತ್ರಿಕ ವಿನ್ಯಾಸಗಳನ್ನು ತಯಾರಿಸಿಕೊಂಡು ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೊಳ್ಳತಕ್ಕದ್ದು, ಕಟ್ಟಡದ ಸುರಕ್ಷತೆ ಹಾಗೂ ವಿನ್ಯಾಸದ ಸಂಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ (Developer) ಆಗಿದ್ದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಯಾವುದೇ ಜವಾಬ್ದಾರಿ ಇರುವುದಿಲ್ಲ. ಈ ಬಗ್ಗೆ ಕಟ್ಟಡ ನಿರ್ಮಾಣ ಕಾರ್ಯವನ್ನು ಪ್ರಸ್ತುತ ಚಾಲ್ತಿ ನಿಯಮಗಳನ್ವಯ ಎಲ್ಲಾ ತಾಂತ್ರಿಕ ಅಂಶಗಳನ್ನು ಪಾಲಿಕೊಂಡು ವಿನ್ಯಾಸಗಳನ್ನು ತಯಾರಿಸಿರುವ ಬಗ್ಗೆ ಹಾಗೂ ಕಟ್ಟಡವನ್ನು ನಿರ್ಮಿಸಿರುವ ಬಗ್ಗೆ Structural Engineer ರವರಿಂದ ನಮೂನೆ-2 ರಲ್ಲಿ ಪ್ರಮಾಣ ಪತ್ರವನ್ನು (Affidavit) ಸ್ವಾಧೀನಾನುಭವ ಪತ್ರ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

25) ಅರ್ಜಿದಾರರು ಕಟ್ಟಡದಲ್ಲಿನ ವಿದ್ಯುತ್ತೀಕರಣ ಕಾಮಗಾರಿಗಳನ್ನು ಎಲ್ಲಾ Electrical Engineering ವಿಧಾನಗಳನ್ನು ಅಳವಡಿಸಿಕೊಂಡು ಉತ್ತಮ ಗುಣಮಟ್ಟದಿಂದ ಸಮರ್ಪಕವಾಗಿ ವಿದ್ಯುತ್ತೀಕರಣ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ಬಗ್ಗೆ ಕರ್ನಾಟಕ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ Electrical Agency ರವರಿಂದ ಪ್ರಮಾಣ ಪತ್ರವನ್ನು (Affidavit) ಸ್ವಾಧೀನಾನುಭವ ಪತ್ರ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

26) ಅರ್ಜಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ Released Materials ಗಳಿಂದಾಗಲೀ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ಬ್ಯಾರಿಕೇಡಿಂಗ್ ವ್ಯವಸ್ಥೆ ಮಾಡಿಕೊಂಡು ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು. ತಪ್ಪಿದಲ್ಲಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.

27) ಅರ್ಜಿದಾರರು ಕರ್ನಾಟಕ ಅಗ್ನಿಶಾಮಕ ಇಲಾಖೆಯವರು ನೀಡಿದ Clearance ಪತ್ರದಲ್ಲಿನ ಎಲ್ಲಾ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

28) ನಕ್ಷೆ ಮಂಜೂರಾತಿಗಾಗಿ ಯಾವುದೇ ತಪ್ಪು ದಾಖಲೆಗಳನ್ನೇನಾದರು ಸಲ್ಲಿಸಿರುವುದು ಕಂಡುಬಂದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ಮಂಜೂರಾದ ನಕ್ಷೆಯನ್ನು ರದ್ದುಪಡಿಸಲಾಗುವುದು ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮ ಜರುಗಿಸಲಾಗುವುದು.

29) ಕಟ್ಟಡ ನಿರ್ಮಾಣದ ಸಮಯದಲ್ಲಿ ಸೆಂಟ್ರಿಂಗ್ ಅಥವಾ ಇನ್ನಿತರೆ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದಲ್ಲಿ ಅದಕ್ಕೆ ಅರ್ಜಿದಾರರು ಸಂಪೂರ್ಣ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರಾತಿ ನೀಡಿದ ಇಲಾಖೆಯು ಜವಾಬ್ದಾರರಾಗಿರುವುದಿಲ್ಲ.

30) ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಇವರ ದಿನಾಂಕ: 06.08.2011ರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಎಎಲ್‌ಎನ್(ಪೂಬಿಬಿ) ಎಸ್.ಆರ್-/41/11-12 (ಪುಟ ಸಂಖ್ಯೆ-41)ರ ಆದೇಶದಲ್ಲಿನ ಷರತ್ತುಗಳನ್ನು ಪಾಲಿಸಲು ಬದ್ಧರಿರತಕ್ಕದ್ದು.

31) ಇತ್ತೀಚೀನ ಸರ್ಕಾರಿ ಆದೇಶ ಸಂಖ್ಯೆ:ನಅಇ/536/ಬೆಂಭೂಸ್ವಾ/2017 ದಿನಾಂಕ: 16.03.2019ರ ಅನ್ವಯ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಪೀಲು ಸಂಖ್ಯೆ 5016/2016ರ ಷರತ್ತಿಗೊಳಪಟ್ಟಿರುತ್ತದೆ.

32) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ/ಹೊರಡಿಸುವ ಯಾವುದೇ ಷರತ್ತುಗಳಿಗೆ /ಆದೇಶಗಳಿಗೆ ಅರ್ಜಿದಾರರು ಭದ್ಧರಾಗಿರತಕ್ಕದ್ದು.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರು (ಉತ್ತರ), ಆರ್.ಟಿ.ನಗರ ಬಿ.ಡಿ.ಎ ವಾಣಿಜ್ಯ ಸಂಕೀರ್ಣ, ಬೆಂಗಳೂರು ರವರ ಮಾಹಿತಿಗಾಗಿ.



Housiey.com